# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪರಿಶಿಷ್ಟ ಜಾತಿ ಮೀಸಲಾತಿ ಪಟ್ಟಿಗೆ ಸೇರ್ಪಡೆಯಾಗಿರುವ 'ಕಲ್ಲುವಡ್ಡರ್' ಮತ್ತು 'ಮಣ್ಣುವಡ್ಡರ್' ಜಾತಿಗಳನ್ನು ರಾಜ್ಯದ ಹಿಂದುಳಿದ ವರ್ಗಗಳ ಮೀಸಲಾತಿ ಜಾತಿ ಪಟ್ಟಿಯಿಂದ ಕೈಬಿಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30.03.2002.
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಕಇ 98 ಎಸ್ಎಡಿ 2015, ದಿನಾಂಕ:02.05.2015.
3. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಇವರ ಪತ್ರ ಸಂಖ್ಯೆ:ಕರಾಹಿಂವಆ/ಜಾಮದೂ/ಸಿಆರ್-33/2017-18, ದಿನಾಂಕ:25.01.2019

* * * * *

**ಪ್ರಸ್ತಾವನೆ:**

ಮೇಲೆ ಕ್ರ.ಸಂ:(1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಭಾರತ ಸಂವಿಧಾನದ ಅನುಚ್ಛೇಧ 15(4)ರಂತೆ ವಿದ್ಯಾಸಂಸ್ಥೆಗಳಲ್ಲಿ ಪ್ರವೇಶ ಮತ್ತು ಅನುಚ್ಛೇಧ 16(4)ರ ಮೇರೆಗೆ ನೇಮಕಾತಿಗಳಲ್ಲಿ ಹಿಂದುಳಿದ ವರ್ಗಗಳಿಗೆ ಮೀಸಲಾತಿ ಸೌಲಭ್ಯ ಕಲ್ಪಿಸಿ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ: 30-3-2002ರಲ್ಲಿ ಆದೇಶಿಸಲಾಗಿದೆ. (ಅನುಬಂಧ-1). ಸದರಿ ಆದೇಶದ ಪ್ರವರ್ಗ-'1'ರ ಕ್ರಮ ಸಂಖ್ಯೆ: 92(ಸಿ)ರಲ್ಲಿ 'ಕಲ್ಲು ವಡ್ಡರ್' ಮತ್ತು 92(ಡಿ)ರಲ್ಲಿ 'ಮಣ್ಣು ವೊಡ್ಡರ್' ಜಾತಿಗಳಿಗೆ ಮೀಸಲಾತಿ ಕಲ್ಪಿಸಲಾಗಿರುತ್ತದೆ.

ಮೇಲೆ ಕ್ರ.ಸಂ:(2)ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ, ಭಾರತ ಸರ್ಕಾರದ ಆದೇಶ ಸಂಖ್ಯೆ:CHAITRA 2,1937 (SAKA), ದಿನಾಂಕ: 23/03/2015ರ The Gazette of India ಅಧಿಸೂಚನೆಯನ್ವಯ, THE CONSTITUTION (SCHEDULED CASTES) ORDERS (AMENDMENT) ACT, 2015 ರ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿನ ಕ್ರ.ಸಂ: 23ರಲ್ಲಿ Bhovi, Od, Odde, Vaddar, Waddar, Voddar, Woddar, Bovi (Non-Besta), Kalluvaddar, Mannuvaddar ಜಾತಿಗಳನ್ನು ಸೇರಿಸಲಾಗಿದೆ. ಸದರಿ ಅಧಿಸೂಚನೆಯ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆಯ ದಿನಾಂಕ: 02/05/2015ರ ಅಧಿಸೂಚನೆ ಸಂಖ್ಯೆ: ಸಕಇ 98 ಎಸ್ಎಡಿ 2015ರಲ್ಲಿ ಸರ್ಕಾರವು ಪರಿಶಿಷ್ಟ ಜಾತಿಗಳಿಗೆ ನೀಡುತ್ತಿರುವ ಎಲ್ಲಾ ಸೌಲಭ್ಯಗಳನ್ನು ಈ ಜಾತಿಗಳಿಗೂ ಅನ್ವಯಿಸುತ್ತದೆ ಎಂದು ಆದೇಶಿಸಲಾಗಿದೆ

ಮೇಲೆ ಕ್ರ.ಸಂ:(3)ರಲ್ಲಿ ಓದಲಾದ ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಇವರ ಪತ್ರದಲ್ಲಿ, ಭಾರತ ಸರ್ಕಾರದ ಆದೇಶ ಸಂಖ್ಯೆ:CHAITRA 2, (SAKA), Dated:23. March 2015ರ ಆದೇಶದ ಕ್ರ.ಸಂ:23ರಲ್ಲಿ Bhovi, Od, Odde, Vaddar, Waddar, Voddar, Bovi (Non -Besta), Kalluvaddar, Mannuvaddar ಜಾತಿಗಳನ್ನು ಪರಿಶಿಷ್ಟ ಜಾತಿಯಲ್ಲಿ ಸೇರಿಸಿರುವ ಮೇರೆಗೆ ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ:ಸಕಇ 98 ಎಸ್ಎಡಿ 2015, ದಿ.02.05.2015 ರಲ್ಲಿ ಈ ಜಾತಿಗಳಿಗೂ ಸರ್ಕಾರವು ನೀಡುತ್ತಿರುವ ಪರಿಶಿಷ್ಟ ಜಾತಿಯ ಎಲ್ಲಾ ಸೌಲಭ್ಯಗಳು ಅನ್ವಯಿಸುತ್ತವೆ ಎಂದು ಆದೇಶಿಸಲಾಗಿರುವುದರಿಂದ ಹಿಂದುಳಿದ ವರ್ಗಗಳ ಹಾಲಿ ಜಾತಿ

17/12/21

ಮೀಸಲಾತಿ ಪಟ್ಟಿಯ ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿ.03.03.2002ರ ಪ್ರವರ್ಗ-1ರ ಕ್ರಮ ಸಂಖ್ಯೆ:92 (C) Kalluvaddar, 92 (d) Mannuvaddar, ಜಾತಿಗಳನ್ನು ಆಯೋಗದ ತೀರ್ಮಾನದಂತೆ ಹಿಂದುಳಿದ ವರ್ಗಗಳ ಜಾತಿ ಮೀಸಲಾತಿ ಪಟ್ಟಿಯಿಂದ ಕೈಬಿಡುವಂತೆ ಕೋರಲಾಗಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಹಿಂವಕ 386 ಬಿಸಿಎ 2017,**
**ಬೆಂಗಳೂರು, ದಿನಾಂಕ:17.12.2021.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಪರಿಶಿಷ್ಟ ಜಾತಿಯ ಎಲ್ಲಾ ಸೌಲಭ್ಯಗಳನ್ನು ರಾಜ್ಯದ **'ಕಲ್ಲು ವಡ್ಡರ್'** ಮತ್ತು **'ಮಣ್ಣು ವೊಡ್ಡರ್'** ಜಾತಿಗಳಿಗೂ ವಿಸ್ತರಿಸಲಾಗಿರುವುದರಿಂದ, ಕರ್ನಾಟಕ ಸರ್ಕಾರದ ಹಿಂದುಳಿದ ವರ್ಗಗಳ ಮೀಸಲಾತಿ ಜಾತಿ ಪಟ್ಟಿಯ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30.03.2002ರ ಪ್ರವರ್ಗ-1ರ ಕ್ರಮ ಸಂಖ್ಯೆ:**92(ಸಿ). 'ಕಲ್ಲು ವಡ್ಡರ್ (Kallu vaddar,)** ಮತ್ತು **92(ಡಿ). 'ಮಣ್ಣು ವೊಡ್ಡರ್'(Mannu voddar)** ಜಾತಿಗಳನ್ನು ಹಿಂದುಳಿದ ವರ್ಗಗಳ ಮೀಸಲಾತಿ ಜಾತಿ ಪಟ್ಟಿಯಿಂದ ಕೈಬಿಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Shaheenparveen 17/12/2021

(ಷಾಹೀನ್ ಪರ್ವೀನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಸಂಕಲನಕಾರರು:**

ಕರ್ನಾಟಕ ರಾಜ್ಯ ಪತ್ರ – ಇವರು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ ಸದರಿ ಸಂಚಿಕೆಯ 500 ಪ್ರತಿಗಳನ್ನು ಮೇಲ್ಕಾಣಿಸಿದ ಕಛೇರಿಗೆ ಒದಗಿಸುವಂತೆ ಕೋರಲಾಗಿದೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ ಲೆಕ್ಕಪರಿಶೋಧನೆ-೧ ಮತ್ತು ೨), ಕರ್ನಾಟಕ, ಬೆಂಗಳೂರು.
2. ಅಡ್ವೋಕೇಟ್ ಜನರಲ್‌ರವರು, ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು.
3. ಎಲ್ಲಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯರು, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.

6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು.
8. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
9. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ವಸಂತ ನಗರ, ಬೆಂಗಳೂರು.
10. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು(ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮೂಲಕ).
11. ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು (ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮೂಲಕ).

**ಪ್ರತಿ:**

1. ಸನ್ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ ಇವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

*******